**1** ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿಕ್ಕಮಗಳೂರು

**ಸ್ಪೆಷಲ್ ಮೊಕದ್ದಮೆ ನಂಃ 24/2022**

| | | | |
|---|---|---|---|
| ಸಾಕ್ಷಿದಾರರ ಹೆಸರು | - ಪರಮೇಶ.ಹೆಚ್.ಡಿ. | | ಪಿಡಬ್ಲೂ - 16 |
| ತಂದೆಯ ಹೆಸರು | - ದಾಸಪ್ಪ | | ಸಿಡಬ್ಲೂ -35 |
| ವಯಸ್ಸು | - 51 ವರ್ಷ | | |
| ಉದ್ಯೋಗ | - ಮುಖ್ಯ ಪೇದೆ 296, ನಗರ ಪೊಲೀಸ್ ಠಾಣೆ, ಚಿಕ್ಕಮಗಳೂರು | | |
| ವಾಸ ಸ್ಥಳ | - ಚಿಕ್ಕಮಗಳೂರು | | |

*(*ಆರೋಪಿಯು ನ್ಯಾಯಾಂಗ ಬಂಧನದಲ್ಲಿದ್ದು, ಆತನನ್ನು ಈ ದಿನ ***Google meet*** ನಲ್ಲಿ ವೀಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಕಾರಾಗೃಹದಿಂದ ಹಾಜರುಪಡಿಸಲಾಗಿರುತ್ತದೆ. ಸಾಕ್ಷಿಯ ವಿಚಾರಣೆಯನ್ನು ದಾಖಲಿಸುವ ಮೊದಲು ಆರೋಪಿಗೆ ಸಾಕ್ಷಿ ಮಾತನಾಡುವುದು ಸರಿಯಾಗಿ ಕೇಳಿಸುತ್ತಿದೆ ಮತ್ತು ವಿಡಿಯೋ ಕಾನ್ಫರೆನ್ಸಿಂಗ್ ಮುಖಾಂತರ ಸಾಕ್ಷಿಯ ವಿಚಾರಣೆಯನ್ನು ದಾಖಲಿಸಲು ಯಾವುದೇ ತಾಂತ್ರಿಕ ಸಮಸ್ಯೆ ಇಲ್ಲವೆಂದು ಖಾತ್ರಿಪಡಿಸಿಕೊಳ್ಳಲಾಯಿತು.*)*

ದಿನಾಂಕಃ 06-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನಾನು 2015 ರಿಂದ 2022 ರವರೆಗೆ ಚಿಕ್ಕಮಗಳೂರಿನ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕಾರ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 19-11-2021 ರಂದು ನಾನು ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿದ್ದ ಸಮಯದಲ್ಲಿ ಬೆಳಿಗ್ಗೆ 9 ಗಂಟೆಗೆ ಬಿದರೆಹಳ್ಳಿ ಗ್ರಾಮದ ವಾಸಿಯಾದ ಪ್ರಾಸಾ.2 ಶಾಂತಪ್ಪ ಬಿನ್ ರಾಜು ರವರು ತಮ್ಮ ತಮ್ಮನ ಮಗನಾದ ಸಂತೋಷ ಎಂಬುವವರೊಂದಿಗೆ ನಮ್ಮ ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆಃ 352/2021 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.6 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.6(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರಥಮ ವರ್ತಮಾನ ವರದಿ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ.7 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.7(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.35 ರವರಿಗೆ ನೀಡಿರುತ್ತೇನೆ.

ಪಾಟೀ ಸವಾಲುಃ ಆರೋಪಿಯ ಪರವಾಗಿ ಶ್ರೀ ಪಿ.ಇ.ಎಸ್ ವಕೀಲರ ಪರವಾಗಿ ಶ್ರೀ ಎಂ.ಸಿ.ಪಿ. ವಕೀಲರು ತಮ್ಮ ಸೀನಿಯರ್ ವಕೀಲರು ಬೆಂಗಳೂರಿಗೆ ಹೋಗಿದ್ದಾರೆ ಎಂದು ನುಡಿದು ಸಾಕ್ಷಿಯ ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ ಸಾಕ್ಷಿಯ ಪಾಟೀ ಸವಾಲನ್ನು

ಮುಂದೂಡಲಾಯಿತು.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )

ಓ.ಹೇ.ಕೇ.ಸ.ಇ.ಎ.ಒ.
ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ